70

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್.ವಿ. ಸಂಕನೂರು ಇವರ ನಿಯಮ 330 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ:-**

**ವಿಷಯ:-**

ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡದಲ್ಲಿ ಕಳೆದ 9 ವರ್ಷಗಳಿಂದ ನಿವೃತ್ತಿ, ನಿಧನದಿಂದ ಖಾಲಿ ಆಗಿರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳನ್ನು ನೇಮಕ ಮಾಡಿಕೊಳ್ಳದೆ ಇರುವುದರಿಂದ ವಿಶ್ವವಿದ್ಯಾಲಯದ ಶೈಕ್ಷಣಿಕ, ಸಂಶೋಧನಾತ್ಮಕ ಹಾಗೂ ಆಡಳಿತಾತ್ಮಕ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡಲು ತೊಂದರೆ ಆಗುತ್ತಿರುವುದನ್ನು ಪ್ರಸ್ತಾಪಿಸುವ ಕುರಿತು.

*******

**ಉತ್ತರ:-**

ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಬೋಧಕ ಹಾಗೂ ಬೋಧಕೇತರ ಹುದ್ದೆಗಳು ನಿವೃತಿಯಿಂದ ಖಾಲಿಯಾಗಿದ್ದು, ಶೈಕ್ಷಣಿಕ, ಸಂಶೋಧನಾತ್ಮಕ ಹಾಗೂ ಆಡಳಿತಾತ್ಮಕ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಲು ಗುತ್ತಿಗೆ ಆಧಾರದ ಮೇಲೆ ಬೋಧಕೇತರ ಸಿಬ್ಬಂದಿಗಳನ್ನು ಹಾಗೂ ಅತಿಥಿ / ಸಹಾಯಕ ಉಪನ್ಯಾಸಕರುಗಳನ್ನು ನೇಮಿಸಿಕೊಂಡು ಕಾರ್ಯಗಳನ್ನು ಜರುಗಿಸಲಾಗುತ್ತಿದೆ. ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ ಖಾಯಂ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದ್ದು, ಆರ್ಥಿಕ ಇಲಾಖೆಯು ಕೋರಿರುವ ಕೆಲವೊಂದು ಹೆಚ್ಚುವರಿ ಮಾಹಿತಿಯನ್ನು ಕರ್ನಾಟಕ ವಿಶ್ವವಿದ್ಯಾಲಯದಿಂದ ಪಡೆಯುವ ಬಗ್ಗೆ ಕ್ರಮವಹಿಸಲಾಗುತ್ತಿದೆ.

**ಸಂಖ್ಯೆ: ಇಡಿ/38/ಯುಕೆವಿ/2023**

(ಡಾ|| ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು